**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂಗಳವರ ನ್ಯಾಯಾಲಯ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ**

# ಎಂ.ವಿ.ಸಿ.ನಂ. 464/2019

ಆರ್‌ಡಬ್ಲ್ಯೂ: 1

ದಿನಾಂಕ 29-08-2024 ರಂದು ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ: 3 ನೇ ಎದುರುದಾರರ ಪರ: ಶ್ರೀ ಸಿ ಒ ವೈ ವಕೀಲರಿಂದ:

ನಾನು ಈ ಅರ್ಜಿಯಲ್ಲಿ 3 ನೇ ಎದುರುದಾರರ ಕಂಪನಿಯಲ್ಲಿ ಡೆಪ್ಯೂಟಿ ಮ್ಯಾನೇಜರ್ ಆಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಹೇಳಿಕೆ ಸಾಕ್ಷ್ಯ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ವಿಷಯವೆಲ್ಲಾ ಸತ್ಯವಾಗಿರುತ್ತದೆ. ಅದನ್ನು ಓದಿ ನೋಡಿ ಸಹಿ ಮಾಡಿರುತ್ತೇನೆ.

ಕಂಪನಿಯವರು ನೀಡಿರುವ ಆತರೈಸೇಷನ್ ಲೆಟರನ್ನು ಹಾಜರುಪಡಿಸಿದ್ದು ಅದನ್ನು ನಿಆರ್-1 ಎಂದು, ದಿನಾಂಕ 09/01/2018 ರಿಂದ 08/01/2019 ರ ಮದ್ಯರಾತ್ರಿಯವರೆಗೆ ಇರುವ ವಿಮಾ ಪಾಲಿಸಿಯನ್ನು ಹಾಜರುಪಡಿಸಿದ್ದು ಅದನ್ನು ನಿಆರ್-2 ಎಂದು, ಒಂದು ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಆರ್-3 ಎಂದು, ದಿನಾಂಕ 12/01/2019 ರಿಂದ 11/01/2020 ರ ಮದ್ಯರಾತ್ರಿಯವರೆಗೆ ಇರುವ ವಿಮಾ ಪಾಲಿಸಿಯನ್ನು ಹಾಜರುಪಡಿಸಿದ್ದು ಅದನ್ನು ನಿಆರ್-4 ಎಂದು, ಒಂದು ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಆರ್-5 ಎಂದು, ನಮ್ಮ ಕಂಪನಿಯರು ಮಾಡಿರುವ ತನಿಖೆಯ ವರದಿಯನ್ನು ಹಾಜರುಪಡಿಸಿದ್ದು ಅದನ್ನು ಗುರುತಿಸುವ ಬಗ್ಗೆ

ಅರ್ಜಿದಾರರ ಪರ ವಕೀಲರು ತಕರಾರು ಮಾಡಿದ್ದು ಸದರಿ ತಕರಾರಿಗೆ ಒಳಪಟ್ಟು ಅದನ್ನು ನಿಆರ್-6 ಎಂದು, ಅಂಚೆ ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಆರ್-7 ಎಂದು, ಕಡೂರು ಪೋಲೀಸರಿಗೆ ಕೊಟ್ಟಂತಹ ನೋಟೀಸಿನ ಕಚೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಆರ್-8 ಎಂದು ಗುರುತಿಸಲಾಯಿತು.

ಆದ್ದರಿಂದ ಅರ್ಜಿದಾರರ ಅರ್ಜಿಯನ್ನು ವಜಾ ಮಾಡಬೇಕಾಗಿ ಕೇಳಿಕೊಳ್ಳುತ್ತೇನೆ.

<u>ಪಾಟೀ ಸವಾಲುಃ ಅರ್ಜಿದಾರರ ಪರಃ ಶ್ರೀ ಟಿ ಜಿ ಎಸ್ ವಕೀಲರಿಂದಃ</u>

ಪಾಟೀ ಸವಾಲನ್ನು ಕೋರಿಕೆಯ ಮೇರೆಗೆ ಮುಂದೂಡಲಾಯಿತು.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸ ಇ ಎ ಒ**

**ಸೀನಿಯರ್ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.**
**ಕಡೂರು.**